# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಡಿ.ವೆಂಕಟರಮಣ, ಅಂದಿನ ಪ್ರಭಾರಿ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಕೆ. ಗುರುರಾಜ್, ಕಿರಿಯ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಳ್ಳಾರಿ ಇವರ ವಿರುದ್ದದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಯವರನ್ನು ನೇಮಿಸುವ ಬಗ್ಗೆ-ಆದೇಶ.

**ಓದಲಾಗಿದೆ:**

1. ಅಧೀಕ್ಷಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಕಲಬುರಗಿ ಇವರ ಪತ್ರ ಸಂಖ್ಯೆ:ಅಅ/ಗ್ರಾ.ಕು.ನೀ& ನೈ/ವೃ/ಕ/ದೂಪ/ತಾಸ/2016-17/976, ದಿ:22.11.2016
2. ಸರ್ಕಾರದ ಕಾರಣ ಕೇಳುವ ನೋಟಿಸ್ ಸಂಖ್ಯೆ:ಗ್ರಾಅಪ 32 ಇಎನ್‌ಕ್ಯೂ 16, ದಿ:13.1.2007.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಪತ್ರ ಸಂಖ್ಯೆ: ಜಿಪಂಬ/ಸಿಬ್ಬಂದಿ(4)/ಸಿಸಿಎ/02/2016-17\493, ದಿ:25.4.2017.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಾಂಕ (1)ರ ದಿನಾಂಕ:22.11.2016 ರ ಪತ್ರದೊಂದಿಗೆ ಬಳ್ಳಾರಿ ತಾಲೂಕಿನ ಬೆಳಗಲ್ಲು ಹಾಗೂ ಇತರೆ 03 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆಗೆ ಸಂಬಂಧಿಸಿದಂತೆ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿಯನ್ನು ನೀಡುವ ಪೂರ್ವದಲ್ಲಿಯೇ ದಿನಾಂಕ:12-04-2010 ರಂದು ಸದರಿ ಕಾಮಗಾರಿಗೆ ಟೆಂಡರ್‌ನ್ನು ಕರೆಯಲಾಗಿದ್ದು ತಾಂತ್ರಿಕ ಮಂಜೂರಾತಿ ಪಡೆಯದೇ 6 ತಿಂಗಳ ಮುಂಚಿತವಾಗಿ ಟೆಂಡರ್‌ನ್ನು ಅಹ್ವಾನಿಸಿ ಕರ್ತವ್ಯ ಲೋಪವನ್ನು ಎಸಗಿರುವ ಆರೋಪಗಳಿಗೆ ಸಂಬಂಧವಾಗಿ ಶ್ರೀ ಡಿ.ವೆಂಕಟರಮಣ, ಅಂದಿನ ಪ್ರಭಾರಿ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಕೆ. ಗುರುರಾಜ್, ಕಿರಿಯ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಳ್ಳಾರಿ ಇವರುಗಳ ವಿರುದ್ಧ ಇಲಾಖೆ ವಿಚಾರಣೆ ಕೈಗೊಳ್ಳಲು ಅಧೀಕ್ಷಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಕಲಬುರಗಿ ಇವರು ಆರೋಪ ಪಟ್ಟಿಯೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದರು.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಶ್ರೀ ಡಿ.ವೆಂಕಟರಮಣ, ಅಂದಿನ ಪ್ರಭಾರಿ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಕೆ. ಗುರುರಾಜ್, ಕಿರಿಯ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಳ್ಳಾರಿ ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧ ಕ.ನಾ.ಸೇ (ವ.ನಿ.,ಮೇ) ನಿಯಮಗಳ ನಿಯಮ 11 ರಡಿ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ, ಮೇಲೆ ಓದಲಾದ ಕ್ರಮಾಂಕ (2) ರ ದಿ:13.1.2017 ರಂದು ಕಾರಣ ಕೇಳುವ ನೋಟಿಸ್‌ನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಲಾಗಿತ್ತು.

ಇದುವರೆಗೂ ಇಬ್ಬರು ಅಪಾದಿತರು ಯಾವುದೇ ವಿವರಣೆಯನ್ನು ಸಲ್ಲಿಸಿರುವುದಿಲ್ಲ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ರವರು ಮೇಲೆ ಓದಲಾದ ಕ್ರಮಾಂಕ (3) ರ ದಿನಾಂಕ:25.4.2017 ರ ಪತ್ರದೊಂದಿಗೆ ಅಪಾದಿತರಾದ ಶ್ರೀ ಡಿ.ವೆಂಕಟರಮಣ ಮತ್ತು ಗುರುರಾಜ್ ಇವರಿಗೆ ಕ್ರಮವಾಗಿ ದಿನಾಂಕ:4.4.2017 ಮತ್ತು 17.4.2017 ರಂದು ಆರೋಪ ಪಟ್ಟಿಯನ್ನು ಜಾರಿ ಮಾಡಿ ಸ್ವೀಕೃತಿಯನ್ನು ಲಗತ್ತಿಸಿ, ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಇದರಿಂದಾಗಿ ಅಪಾದಿತರು ಆರೋಪ ಪಟ್ಟಿಯನ್ನು ಪಡೆದು ಒಂದು

ತಿಂಗಳಿಗಿಂತ ಹೆಚ್ಚಿನ ಅವಧಿ ಕಳೆದರು ವಿವರಣೆ ಸಲ್ಲಿಸಿರುವುದಿಲ್ಲ. ಈ ಕಾರಣದಿಂದ ಸರ್ಕಾರವು ಅಪಾದಿತರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಅಪಾದಿತರಿಂದ ಯಾವುದೇ ವಿವರಣೆ ಇರುವುದಿಲ್ಲವೆಂದು ಪರಿಗಣಿಸಿ, ಆರೋಪಗಳ ಸತ್ಯಾಸತ್ಯತೆಯನ್ನು ಅರಿಯುವ ಸಲುವಾಗಿ ಇಲಾಖೆ ವಿಚಾರಣೆ ಮುಂದುವರಿಸಲು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಆದೇಶ.

**ಆದೇಶ ಸಂಖ್ಯೆ: ಗ್ರಾಅಪ 32 ಇಎನ್‌ಕ್ಯೂ 2016, ಬೆಂಗಳೂರು, ದಿನಾಂಕ:07.6.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ, ಶ್ರೀ ಡಿ.ವೆಂಕಟರಮಣ, ಅಂದಿನ ಪ್ರಭಾರಿ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಕೆ. ಗುರುರಾಜ್, ಕಿರಿಯ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಳ್ಳಾರಿ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರಡಿ ನಡೆಸಲು ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಶ್ರೀ ಬಿ.ಎಂ.ಅಂಗಡಿ, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ನಿಯಮ 11 (5)(ಸಿ) ರನ್ವಯ ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಗಳು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನದ ಪ್ರಕಾರ ನಡೆಸಿ, 3 ತಿಂಗಳೊಳಗಾಗಿ ಸರ್ಕಾರಕ್ಕೆ ವರದಿ ಸಲ್ಲಿಸುವುದು. ವಿಚಾರಣಾಧಿಕಾರಿಗಳು ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆ ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

07/06/201

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ/ಜಲ ಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ,
3. ಆಯುಕ್ತರು, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ.
6. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ.
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.

8. ಬಿ.ಎಂ.ಅಂಗಡಿ, ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ನಂ.2107, ಸಾಯಿ ಕಿರಣ್, 8 ನೇ ಮೇನ್, 2 ನೇ ಕ್ರಾಸ್, ಜುಡಿಷಿಯಲ್ ಲೇಔಟ್, ಅಲ್ಲಾಳಸಂದ್ರ, ಯಲಹಂಕ, ಬೆಂಗಳೂರು. (ಮೊಬೈಲ್ ಸಂಖ್ಯೆ:9449635961)
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
10. ತಾಂತ್ರಿಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ.
11. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಮುಖಾಂತರ)
12. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
13. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ, ಉಪ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
14. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.